ಮೈಸೂರ ಗೆಜೆಟ್ಟ

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಸೆಪ್ಟಂಬರ್ ತಾ॥ 19, ಸ್ರ 1885.

ಸೂಚನೆ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರುವಗ್ಗೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.
ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಪರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಟೇನ್‌ಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟೂದ ಡಿವಿಡೆಂಡ್ ವಾರಂಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೇನ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡಸ್ಸ,
ಕಾಂಪ್ಟ್ರೋಲರ್.

ಅಂಚೇ ಇಲಾಖೆ.

ನಂ. 260—143. ತಾರೀಖು 4ನೇ ಸೆಪ್ಟಂಬರ್ 1885.

ಇದರಿಂದ ಸಕಲ ಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಮೈಸೂರು ಮಹಾರಾಜ ರಾಜಾಸಾಹೇಬ್ ಬಹದೂರವರ ದಿವಾನರವರ ಅಪ್ಪಣೆ ಅನುಸರಿಸಿ ಈ ಕೆಳಗೆ ಕಂಡ ಸ್ಥಳಗಳೊಳಗೆ ಹೋಬಳಿ ಅಂಚೆ ಆಫೀಸುಗಳು ಸ್ಥಾಪಿಸಲ್ಪಟ್ಟು ಇರುತ್ತೆ:—

ತಾಲ್ಲೂಕು.	ಅಂಚೆ ಆಫೀಸ್ ಸ್ಥಾಪಿಸಲ್ಪಟ್ಟ ಸ್ಥಳಗಳ ಹೆಸರು.
ಮದ್ದಗಿರಿ ..	ತೊವಿನಕೆರೆ
ಶಿಡ್ಲಘಟ್ಟ ..	ಕೈವಾರ

೨ಜ್ಲಫೆಟ್ಟ	..	ಜಂಗಂಕೋಟೆ
ಡಿಟೋ	..	ಸಾದ್ಲಿ
ಡಿಟೋ	..	ಬಸೆಟ್ಟಹಳ್ಳಿ

ಬಿ. ಮರಿಗಂಗಯ್ಯ,
ಅಂಜೇ ಬರ್ಕಿ.

ಮೈಸೂರು ಡಿಸ್ಟ್ರಿಕ್ಟ್.

ಮೈಸೂರು ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

1885ನೇ ಇಸವಿ ಅರ್ಜೀ ನಂಬರ್ 335.

ಮೃತಪಟ್ಟ ಕ್ಯಾನುಭೋಗ ಸುಬ್ಬರಾಯರ ಆಸ್ತಿ ವಿಷಯದಲ್ಲಿ—

ಅರ್ಜಿದಾರು ೨ೀಕಂತಯ್ಯ, ಮೈನರ್ ಗಾರ್ಡಿಯರ್ ಮತ್ತು ತಾಯಿ ಸಬ್ಬಮ್ಮ ಮೃತಪಟ್ಟ ಸದರೀ ಕ್ಯಾನುಭೋಗ ಸುಬ್ಬರಾಯರಿಗೆ ದತ್ತು ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ನಂಜನಗೂಡು ತಾಲ್ಲೂಕು ಕಿರಗುಂದ ಸ್ಥಳದ ಸದರೀ ೨ೀಕಂತಯ್ಯ ಮೈನರ್ ಗಾರ್ಡಿಯರ್ ಮತ್ತು ತಾಯಿ ಸುಬ್ಬಮ್ಮ ಸದರೀ ವಾಸಸ್ಥರಾಗಿ ಮೃತಪಟ್ಟ ಕ್ಯಾನುಭೋಗ ಸುಬ್ಬರಾಯರ ಜೆಂದಗಿ ಬಗ್ಯಾಗಿ ಬರತಕ್ಕ 800 ರೂಪಾಯಿಗಳ ಸಾಲವನ್ನು ವಸೂಲ್‌ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಗೆ ಖಾಯಿಷ್ ಮೊಡಿರುತ್ತಾರೆ.

ಸದರೀ ದರಖಾಸ್ತುದಾರರಾದ ೨ೀಕಂತಯ್ಯ ಮೈನರ, ಗಾರ್ಡಿಯರ್ ಮತ್ತು ತಾಯಿ ಸುಬ್ಬಮ್ಮನ ಅರ್ಜೀಯನ್ನು 1885ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 30ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಸೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕ್ಯಾನುಭೋಗ ಸುಬ್ಬರಾಯರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1885ನೇ ಇಸವಿ ಅರ್ಜೀ ನಂಬರ್ 379.

ಮೃತಪಟ್ಟ ಮಾದೇಗೌಡರ ಆಸ್ತಿ ವಿಷಯದಲ್ಲಿ—

ಅರ್ಜೀದಾರು ನಂಜೇಗೌಡ, ಮೃತಪಟ್ಟ ಸದರೀ ಮಾದೇಗೌಡರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ನಂಜನಗೂಡು ತಾಲ್ಲೂಕು ಕುರಿಹುಂಡಿ ಸ್ಥಳದ ಸದರೀ ನಂಜೇಗೌಡರು ಸದರೀ ವಾಸಸ್ಥರಾಗಿ ಮೃತಪಟ್ಟ ಮಾದೇಗೌಡರ ಜೆಂದಗಿ ಬಗ್ಯಾಗಿ ಬರತಕ್ಕ 200 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನಂಜೆಗೌಡರ ಅರ್ಜೀಯನ್ನು 1885ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 30ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಸೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಾದೇಗೌಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಯಿರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1885ನೇ ಇಸವಿ ಅರ್ಜೀ ನಂಬರ್ 409.

ಮೃತಪಟ್ಟ ನಾರಣಮ್ಮನ ಆಸ್ತಿ ವಿಷಯದಲ್ಲಿ—

ಅರ್ಜೀದಾರು ಕೃಷ್ಣಾಜಟ್ಟಿ, ಮೃತಪಟ್ಟ ಸದರೀ ನಾರಣಮ್ಮಗೆ ಅಳಿಯ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಲಷ್ಕರ್ ಮೊಹಲಾ ಸ್ಥಳದ ಸದರೀ ಕೃಷ್ಣಾಜಟ್ಟಿಯು ಸದರೀ ವಾಸಸ್ಥರಾಗಿ ಮೃತಪಟ್ಟ ನಾರಣಮ್ಮನ ಜೆಂದಗಿ ಬಗ್ಯಾಗಿ ಬರತಕ್ಕ 800 ರೂಪಾಯಿಗಳ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈಕೋರ್ಟಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕೃಷ್ಣಾಜಟ್ಟಿ ಅರ್ಜೀಯನ್ನು 1885ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 30ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಸೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ನಾರಣಮ್ಮನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.